ಸ್ವಾತಂತ್ರ್ಯದ ಅಮೃತ ಮಹೋತ್ಸವ

1969-2019

# ಕರ್ನಾಟಕ ಜಾನಪದ ವಿಶ್ವವಿದ್ಯಾಲಯ

**ಗೊಟಗೋಡಿ, ತಾ. ಶಿಗ್ಗಾವಿ ಜಿ. ಹಾವೇರಿ**

**ರಾಷ್ಟ್ರೀಯ ಸೇವಾ ಯೋಜನಾ ಕೋಶ**

## ವಿಶ್ವ ಪರಿಸರ ದಿನಾಚರಣೆ

## ಮತ್ತು ಶ್ರಮದಾನ ಕಾರ್ಯಕ್ರಮ

ಅಧ್ಯಕ್ಷತೆ

**ಪ್ರೊ. ಸಿ.ಟಿ. ಗುರುಪ್ರಸಾದ್**

ಮಾನ್ಯ ಕುಲಪತಿಗಳು (ಪ್ರ)

ಉದ್ಘಾಟನೆ

**ಶ್ರೀ ಎಸ್.ಬಿ. ಶೆಟ್ಟೆಣ್ಣವರ** ಭಾ.ಆ.ಸೇ.

ಮಾನ್ಯ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ

ಮುಖ್ಯ ಅತಿಥಿಗಳು

**ಶ್ರೀ ರಮೇಶ ಶೇತಸನದಿ**

ವಲಯ ಅರಣ್ಯ ಅಧಿಕಾರಿಗಳು, ದುಂಡಶಿ

ಅತಿಥಿಗಳು

**ಡಾ. ಸುನಂದ ಆರ್. ಕಳಕಣ್ಣನವರ್**

ಸಿಂಡಿಕೇಟ್ ಸದಸ್ಯರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ

ಉಪಸ್ಥಿತಿ

**ಪ್ರೊ. ಎನ್.ಎಂ. ಸಾಲಿ**

ಕುಲಸಚಿವರು (ಮೌಲ್ಯಮಾಪನ)

**ದಿನಾಂಕ: 06.06.2022** **ಸಮಯ: ಬೆಳಗ್ಗೆ 11.00 ಘಂಟೆಗೆ**

**ಸ್ಥಳ: ಆಡಳಿತ ಭವನದ ಆವರಣ**

**ಸಹಕಾರ**

**ಸಾಂಸ್ಕೃತಿಕ ಕಾರ್ಯಕ್ರಮಗಳು**

**ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್, ಜಿಲ್ಲಾ ಘಟಕ, ಹಾವೇರಿ**

## ಸರ್ವರಿಗೂ ಆದರದ ಸ್ವಾಗತ

**ಡಾ. ಮಲ್ಲಿಕಾರ್ಜುನ ಬಿ. ಮಾನ್ಪಡೆ**
ಸಂಯೋಜನಾಧಿಕಾರಿ,
ರಾಷ್ಟ್ರೀಯ ಸೇವಾ ಯೋಜನಾ ಕೋಶ, ಕಜಾವಿವಿ

**ಪ್ರೊ. ಸಿ.ಟಿ. ಗುರುಪ್ರಸಾದ್**
ಕುಲಸಚಿವರು
ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ

# ವಿಶ್ವ ಪರಿಸರ ದಿನಾಚರಣೆ ನಾಳೆ

**ಶಿಗ್ಗಾಂವಿ:** ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ, ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ ಹಾವೇರಿ,



ರಾಷ್ಟ್ರೀಯ ಸೇವಾ ಯೋಜನಾ ಕೋಶ ಆಶ್ರಯದಲ್ಲಿ ಜೂ. 6ರಂದು ವಿಶ್ವ ಪರಿಸರ ದಿನಾಚರಣೆ ಮತ್ತು ಶ್ರಮದಾನ ಕಾರ್ಯಕ್ರಮ, ವಿಶ್ವವಿದ್ಯಾಲಯದ ಆಡಳಿತ ಭವನದ ಆವರಣದಲ್ಲಿ ಬೆಳಗ್ಗೆ 11 ಗಂಟೆಗೆ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಭಾರ ಕುಲಪತಿ ಪ್ರೊ. ಸಿ.ಟಿ. ಗುರುಪ್ರಸಾದ ವಹಿಸಿಕೊಳ್ಳುವರು. ಜಿಲ್ಲಾಧಿಕಾರಿ ಎಸ್.ಬಿ. ಶೆಟ್ಟೆಣ್ಣವರ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವಲಯ ಅರಣ್ಯ ಅಧಿಕಾರಿ ರಮೇಶ ಶೀತಸನದಿ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯ ಡಾ. ಸುನಂದ ಆರ್. ಕಳಕಣ್ಣನವರ, ಮೌಲ್ಯ ಮಾಪನ ಕುಲಸಚಿವ ಎನ್.ಎಂ. ಸಾಲಿ ಭಾಗವಹಿಸುವರು ಎಂದು ವಿವಿ ಪ್ರಕಟಣೆ ತಿಳಿಸಿದೆ.

**Source: Vijayavani_05-06-2022**

## ಜಾನಪದ ವಿಶ್ವವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ

# 'ರಾಸಾಯನಿಕದಿಂದ ಪರಿಸರ ನಾಶ'

ಪ್ರಜಾವಾಣಿ ವಾರ್ತೆ

ಶಿಗ್ಗಾವಿ: ಭೂಮಿಗೆ ಅತಿಯಾದ ರಾಸಾಯನಿಕ ಗೊಬ್ಬರ, ಕೀಟನಾಶಕ ಬಳಕೆ ಮಾಡುವ ಮೂಲಕ ಮಣ್ಣಿನ ಫಲವತ್ತತೆ ಹಾಳಾಗುತ್ತಿದ್ದು, ಅದರಿಂದ ಪರಿಸರದ ಮೇಲೆ ಪರಿಣಾಮ ಬೀರುತ್ತಿದೆ' ಎಂದು ಜಿಲ್ಲಾಧಿಕಾರಿ ಸಂಜಯ ಶೆಟ್ಟೆಣ್ಣವರ ಹೇಳಿದರು.

ತಾಲ್ಲೂಕಿನ ಗೊಟಗೋಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಆವರಣದಲ್ಲಿ ರಾಷ್ಟ್ರೀಯ ಸೇವಾ ಯೋಜನಾ ಕೋಶದ ವತಿಯಿಂದ ಸೋಮವಾರ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಸಸಿ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

'ಪ್ರಸ್ತುತ ದಿನಗಳಲ್ಲಿ ಪರಿಸರದ ಜಾಗೃತಿ ಮೂಡಿಸುವುದು ಅನಿವಾರ್ಯವಾಗಿದೆ' ಎಂದರು.

ದುಂಡಶಿ ವಲಯ ಅರಣ್ಯಾಧಿಕಾರಿ ರಮೇಶ ಸೇತಸನದಿ ಮಾತನಾಡಿ, 'ಸಾರ್ವಜನಿಕರು ಪರಿಸರದ ಜೊತೆಗೆ ಸಾಮರಸ್ಯದಿಂದ ಬದುಕುವುದನ್ನು ಕಲಿಯಬೇಕು' ಎಂದರು.

ಅಧ್ಯಕ್ಷತೆ ವಹಿಸಿದ್ದ ವಿವಿ ಪ್ರಭಾರ ಕುಲಪತಿ ಪ್ರೊ. ಸಿ.ಟಿ ಗುರುಪ್ರಸಾದ್ ಮಾತನಾಡಿ, 'ಪರಿಸರ ರಕ್ಷಣೆ ನಮ್ಮೆಲ್ಲರ ಕಾಳಜಿಯಾಗಬೇಕು. ಭೂಮಿ ಮೇಲಿರುವ ಸಮಸ್ತ ಜೀವಸಂಕುಲಗಳು ಬದುಕಲು ಪರಿಸರ ಅನೀವಾರ್ಯವಾಗಿದೆ' ಎಂದರು.

ಮೌಲ್ಯಮಾಪನ ಕುಲಸಚಿವ ಎನ್.ಎಂ.ಸಾಲಿ ಮಾತನಾಡಿದರು. ಹಿರಿಯ ಸಂಶೋಧನಾಧಿಕಾರಿ ಡಾ.ಪ್ರೇಮಕುಮಾರ, ಸಿಂಡಿಕೇಟ್ ಸದಸ್ಯ ವೆಂಕಟೇಶ ಕೆ,ಸಹಾಯಕ ಕುಲಸಚಿವ ಷಹಜಾನ್ ಮುದಕವಿ, ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷೆ ಡಾ. ವಿಜಯಲಕ್ಷ್ಮೀ ಗೇಟಿಯವರ, ಸಹಾಯಕ ಪ್ರಾಧ್ಯಾಪಕರಾದ ಡಾ. ಚಂದ್ರಪ್ಪ ಸೊಬಟಿ, ಶರೀಫ ಮಾಕಪ್ಪವರ, ಡಾ.ಮಲ್ಲಿಕಾರ್ಜುನ ಮಾನ್ಪಡೆ ಇದ್ದರು.



ಶಿಗ್ಗಾವಿ ತಾಲ್ಲೂಕಿನ ಗೊಟಗೋಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಆವರಣದಲ್ಲಿ ಸೋಮವಾರ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಸಂಜಯ ಶೆಟ್ಟೆಣ್ಣವರ ಸಸಿ ನೆಡುವ ಮೂಲಕ ಚಾಲನೆ ನೀಡಿದರು

**Source: Prajavani_07-06-2022**

## ಪರಿಸರ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಸಂಜಯ ಶೆಟ್ಟೆಣ್ಣವರ ಕಿವಿಮಾತು

# ರಾಸಾಯನಿಕದ ಅತಿಯಾದ ಬಳಕೆ ಬೇಡ

■ ವಿಜಯವಾಣಿ ಸುದ್ದಿಜಾಲ ಶಿಗ್ಗಾಂವಿ

ಕಲ್ಲಿದ್ದಲು, ಪೆಟ್ರೋಲಿಯಂ ಹಾಗೂ ರಾಸಾಯನಿಕ ಅತಿಯಾದ ಬಳಕೆಯಿಂದ ಭೂಮಿ ಫಲವತ್ತತೆ, ಪರಿಸರ ಹಾಳಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಜಯ ಶೆಟ್ಟೆಣ್ಣವರ ಹೇಳಿದರು.

ಸ್ಥಳೀಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲರಿಗೂ ಬದುಕಲು ಇರುವ ಆಶ್ರಯ ತಾಣ ಭೂಮಿ. ಅದರ ರಕ್ಷಣೆ ನಮ್ಮೆಲ್ಲರ ಹೊಣೆ. ಪ್ರಸ್ತುತ ದಿನಗಳಲ್ಲಿ ಪರಿಸರ ಜಾಗೃತಿ ಮೂಡಿಸುವುದು ಅನಿವಾರ್ಯವಾಗಿದೆ. ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳ ಪಾತ್ರ ಬಹುಮುಖ್ಯವಾಗಿದೆ. ಜಾನಪದ ವಿಶ್ವವಿದ್ಯಾಲಯವು ಇತರ ವಿವಿಗಳಿಗಿಂತ ಭಿನ್ನವಾಗಿದೆ. ವಿವಿ ಕೇವಲ ಪದವಿ ಕೊಡುವ ವಿಶ್ವವಿದ್ಯಾಲಯವಲ್ಲ. ವಿಶೇಷಜ್ಞಾನದ ಶಿಸ್ತು ಕಲಿಸುವ ವಿಭಿನ್ನವಾದ ಶೈಕ್ಷಣಿಕ ಸಂಸ್ಥೆ. ಇಲ್ಲಿ ಕಲಿತ ವಿದ್ಯಾರ್ಥಿಗಳು ದೇಸಿ ಜ್ಞಾನ, ಸಮುದಾಯಗಳ ಪಾರಂಪರಿಕ ಜ್ಞಾನ ಹಾಗೂ ಜಾನಪದವನ್ನು ಉಳಿಸುವ ಕೆಲಸ ಮಾಡಬೇಕು. ಈ ವಿಶ್ವವಿದ್ಯಾಲಯದ ಬೆಳವಣಿಗೆಗೆ ಜಿಲ್ಲಾಡಳಿತ, ಜಿಪಂನಿಂದ ಸಂಪೂರ್ಣ ಸಹಕಾರ, ಅಗತ್ಯ ಮೂಲ ಸೌಲಭ್ಯ ಒದಗಿಸಲಾಗುವುದು ಎಂದರು.

ದುಂಡಶಿ ವಲಯ ಅರಣ್ಯಾಧಿಕಾರಿ ರಮೇಶ ಸೇತಸನದಿ ಮಾತನಾಡಿ, ಸಾರ್ವಜನಿಕರು ಪರಿಸರದೊಂದಿಗೆ ಸಾಮರಸ್ಯದಿಂದ ಬದುಕುವುದನ್ನು ಕಲಿಯಬೇಕು. ಆಕ್ರಮಣ ಒಳ್ಳೆಯದಲ್ಲ, ಹೆಚ್ಚೆಚ್ಚು ಗಿಡಗಳನ್ನು ಬೆಳೆಸುವ ಜೊತೆಗೆ ಉತ್ತಮ ವಾತಾವರಣ ನಿರ್ಮಿಸಬೇಕು. ಕೋವಿಡ್ ಎಲ್ಲರ ಮೇಲೆ ಹೇಗೆ ದುಷ್ಪರಿಣಾಮ ಬೀರಿದೆ ಎನ್ನುವುದಕ್ಕೆ ಪರಿಸರ ಮಾಲಿನ್ಯವೇ ಕಾರಣ. ಹಾಗಾಗಿ, ಮನುಷ್ಯ ಪರಿಸರದೊಂದಿಗೆ ಗೌರವಪೂರ್ವಕವಾಗಿ ಬದುಕಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ವಿವಿ ಪ್ರಭಾರ ಕುಲಪತಿ ಪ್ರೊ. ಸಿ.ಟಿ. ಗುರುಪ್ರಸಾದ ಮಾತನಾಡಿ, ಇಂದಿನ ದಿನಗಳಲ್ಲಿ ಪರಿಸರ ಬಗ್ಗೆ ಕಾಳಜಿ ವಹಿಸುವುದು ಅನಿವಾರ್ಯ. ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ವಿಶ್ವಸಂಸ್ಥೆ ಮೊಟ್ಟ ಮೊದಲಿಗೆ ವಿಶ್ವ ಪರಿಸರ ದಿನ ಆಚರಿಸುವ ಪ್ರಸ್ತಾವನೆ ಮಂಡಿಸಿತು. ಪರಿಸರ ರಕ್ಷಣೆ ನಮ್ಮೆಲ್ಲರ ಕಾಳಜಿಯಾಗಬೇಕು ಎಂದರು. ವಿವಿ ಮೌಲ್ಯಮಾಪನ ಕುಲಸಚಿವ ಎನ್.ಎಂ. ಸಾಲಿ ಮಾತನಾಡಿ, ಪರಿಸರ ರಕ್ಷಣೆ ನಮ್ಮ ಮನೆಯಿಂದಲೇ ಪ್ರಾರಂಭವಾಗಬೇಕು. ಸುತ್ತಲಿನ ವಾತಾವರಣವನ್ನು ಅಚ್ಚುಕಟ್ಟಾಗಿ ನಿರ್ಮಿಸಲು ಸ್ವಆಸಕ್ತಿಯಿಂದ ಕ್ರಮ ಕೈಗೊಳ್ಳಬೇಕು ಎಂದರು.

ವಿವಿ ಆವರಣದಲ್ಲಿ ಜಿಲ್ಲಾಧಿಕಾರಿ ಸಸಿ ನೆಡುವ ಮೂಲಕ ವನಮಹೋತ್ಸವ ಆಚರಿಸಿದರು. ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್‌ನ ಡಾ. ವಿಜಯಲಕ್ಷ್ಮೀ ಗೇಟಿಯವರ ನೇತೃತ್ವದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಹಿರಿಯ ಸಂಶೋಧನಾಧಿಕಾರಿ ಡಾ. ಪ್ರೇಮಕುಮಾರ, ಸಿಂಡಿಕೇಟ್ ಸದಸ್ಯ ವೆಂಕಟೇಶ ಕೆ., ಸಹಾಯಕ ಕುಲಸಚಿವ ಷಹಜಾನ್ ಮುದಕವಿ, ಕಲಾ ಅಧ್ಯಾಪಕ ಶರೀಫ ಮಾಕಪ್ಪವರ, ಸಹಾಯಕ ಪ್ರಾಧ್ಯಾಪಕರಾದ ಡಾ. ಚಂದ್ರಪ್ಪ ಸೊಬಟಿ, ಡಾ. ಮಲ್ಲಿಕಾರ್ಜುನ ಮಾನ್ಪಡೆ, ಇತರರಿದ್ದರು.




ಶಿಗ್ಗಾಂವಿಯಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಸೋಮವಾರ ಏರ್ಪಡಿಸಿದ್ದ ಪರಿಸರ ದಿನಾಚರಣೆಯನ್ನು ಜಿಲ್ಲಾಧಿಕಾರಿ ಸಂಜಯ ಶೆಟ್ಟೆಣ್ಣವರ ಉದ್ಘಾಟಿಸಿದರು. ವಿವಿ ಪ್ರಭಾರ ಕುಲಪತಿ ಪ್ರೊ. ಸಿ.ಟಿ. ಗುರುಪ್ರಸಾದ್, ರಮೇಶ ಸೇತಸನದಿ, ಎನ್.ಎಂ. ಸಾಲಿ, ಇತರರಿದ್ದರು.

**Source: Vijayavani_07-06-2022**

# ಅತಿಯಾದ ರಾಸಾಯನಿಕ ಬಳಕೆಯಿಂದ ಪರಿಸರ ಮಲೀನ

## ವಿಶ್ವ ಪರಿಸರ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಎಸ್.ಬಿ. ಶೆಟ್ಟೆಣ್ಣವರ ಹೇಳಿಕೆ | ಪರಿಸರ ರಕ್ಷಣೆಗೆ ಎಲ್ಲರೂ ಮುಂದಾಗಿ

KP




**ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಎಸ್.ಬಿ. ಶೆಟ್ಟೆಣ್ಣವರ ಉದ್ಘಾಟಿಸಿದರು.**

• **ಕನ್ನಡಪ್ರಭ ವಾರ್ತೆ** ಶಿಗ್ಗಾಂವಿ

ಅತಿಯಾದ ಕ್ರಿಮಿನಾಶಕ ಬಳಕೆ ಹಾಗೂ ಭೂಮಿಗೆ ಸಿಂಪಡಿಸುವ ರಾಸಾಯನಿಕಗಳಿಂದ ಭೂಮಿಯ ಫಲವತ್ತತೆಯಿಂದ ಹಿಡಿದು ಎಲ್ಲ ಪರಿಸರಕ್ಕೂ ಹಾನಿಯಾಗುತ್ತಿದೆ. ಇದರಿಂದ ಪರಿಸರ ಮಲೀನವಾಗುತ್ತಿದೆ ಎಂದು ಜಿಲ್ಲಾಧಿಕಾರಿ ಎಸ್.ಬಿ. ಶೆಟ್ಟೆಣ್ಣವರ ಹೇಳಿದರು.

ತಾಲೂಕಿನ ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಇವರ ಸಹಯೋಗದಲ್ಲಿ ನಡೆದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ದಿನಗಳಲ್ಲಿ ಪರಿಸರದ ಜಾಗೃತಿ ಮೂಡಿಸುವುದು ಅನಿವಾರ್ಯವಾಗಿದೆ. ಮನುಷ್ಯ ಮತ್ತು ಪ್ರಾಣಿಗಳು ಬದುಕಲು ಇರುವ ಒಂದೆ ಒಂದು ಆಶ್ರಯ ತಾಣವೆಂದರೆ ಅದು ಭೂಮಿ. ಅದರ ರಕ್ಷಣೆ ನಮ್ಮೆಲ್ಲರ ಹೊಣೆ, ಪರಿಸರ ಜಾಗೃತಿ ಮೂಡಿಸುವಲ್ಲಿ ವಿಶ್ವವಿದ್ಯಾಲಯಗಳ ಪಾತ್ರ ಬಹುಮುಖ್ಯವಾಗಿದೆ.

ಜಾನಪದ ವಿಶ್ವವಿದ್ಯಾಲಯವು ಇತರ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿದೆ. ಇದು ಕೇವಲ ಪದವಿ ಕೊಡುವ ವಿಶ್ವವಿದ್ಯಾಲಯವಲ್ಲ, ಇಲ್ಲಿ ವಿಶೇಷವಾದ ಜ್ಞಾನದ ಶಿಸ್ತನ್ನು ಕಲಿಸುವ ವಿಭಿನ್ನವಾದ ಶೈಕ್ಷಣಿಕ ಸಂಸ್ಥೆ. ಅದರ ಮೂಲಕ ನೆಲದ ಪರಂಪರೆ, ಸಂಸ್ಕೃತಿಯನ್ನು ಉಳಿಸುವ ಕೆಲಸವಾಗಬೇಕು. ಇಲ್ಲಿ ಕಲಿತ ವಿದ್ಯಾರ್ಥಿಗಳು ದೇಸಿಜ್ಞಾನವನ್ನು, ಸಮುದಾಯಗಳ ಪಾರಂಪರಿಕ ಜ್ಞಾನವನ್ನು ಹಾಗೂ ಜಾನಪದವನ್ನು ಉಳಿಸುವ ಕೆಲಸ ಮಾಡಬೇಕು. ಜೊತೆಗೆ ಈ ವಿಶ್ವವಿದ್ಯಾಲಯದ ಬೆಳವಣಿಗೆಗೆ ಜಿಲ್ಲಾಡಳಿತ ಮತ್ತು ಜಿಪಂ ವತಿಯಿಂದ ಸಂಪೂರ್ಣ ಸಹಕಾರ ನೀಡಲಾಗುವುದು. ಇಲ್ಲಿನ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕಾರ್ಯವನ್ನು ಮಾಡಲಾಗುವದು ಎಂದರು.

ಅತಿಥಿಗಳಾಗಿ ಆಗಮಿಸಿದ ದುಂಡಶಿ ವಲಯ ಅರಣ್ಯಾಧಿಕಾರಿಗಳಾದ ರಮೇಶ ಸೇತಸನದಿ ಮಾತನಾಡಿ, ಸಾರ್ವಜನಿಕರು ಪರಿಸರದ ಜೊತೆಗೆ ಸಾಮರಸ್ಯದಿಂದ ಬದುಕುವುದನ್ನು ಕಲಿಯಬೇಕು. ಆಕ್ರಮಣ ಒಳ್ಳೆಯದಲ್ಲ, ಹೆಚ್ಚು ಹೆಚ್ಚು ಗಿಡಮರಗಳನ್ನು ಬೆಳೆಸುವುದರ ಜೊತೆಗೆ ಉತ್ತಮ ವಾತಾವರಣ ನಿರ್ಮಾಣ ಮಾಡಬೇಕು. ಪರಿಸರ ರಕ್ಷಣೆ ಎನ್ನುವುದು ನಿನ್ನೆ ಮೊನ್ನೆ ಬಂದಿರುವ ಕಲ್ಪನೆಯಲ್ಲ ನಮ್ಮ ರಾಜ ಮಹಾರಾಜರ ಕಾಲದಿಂದಲೂ ಈ ಪರಂಪರೆ ಮುಂದುವರೆದಿದೆ. ಈಗಾಗಲೇ ಕೋವಿಡ್- 19 ರೋಗ ನಮ್ಮ ಮೇಲೆ ಹೇಗೆ ದುಷ್ಪರಿಣಾಮ ಬೀರಿದೆ ಎನ್ನುವುದಕ್ಕೆ ಪರಿಸರ ಮಾಲಿನ್ಯವೇ ಕಾರಣ. ಹಾಗಾಗಿ ಮನುಷ್ಯ ಪರಿಸರದ ಜೊತೆಗೆ ಗೌರವಪೂರ್ವಕವಾಗಿ ಬದುಕಬೇಕು ಎಂದರು.

ಜಾನಪದ ವಿಶ್ವವಿದ್ಯಾಲಯದಲ್ಲಿ ಉತ್ತಮವಾದ ಪರಿಸರ ನಿರ್ಮಾಣ ಮಾಡುವುದಕ್ಕೆ ಸಂಪೂರ್ಣ ಸಹಕಾರ ನೀಡಲಾಗುವುದು. ಜಾನಪದ ವಿಶ್ವವಿದ್ಯಾಲಯದ ಆವರಣದಲ್ಲಿ ಸುಂದರವಾದ ಪರಿಸರವನ್ನು ನಿರ್ಮಾಣ ಮಾಡಬಹುದು. ವಿವಿ ಸಹಕಾರ ಕೊಟ್ಟರೆ ನಮ್ಮ ವಿಭಾಗ ಸಿದ್ಧವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ವಿವಿಯ ಪ್ರಭಾರ ಕುಲಪತಿ ಪ್ರೊ. ಸಿ.ಟಿ. ಗುರುಪ್ರಸಾದ್ ಮಾತನಾಡಿ, ಇಂದಿನ ದಿನಗಳಲ್ಲಿ ಪರಿಸರದ ಬಗ್ಗೆ ಕಾಳಜಿ ವಹಿಸುವುದು ಅನಿವಾರ್ಯವಾಗಿದೆ. ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ವಿಶ್ವಸಂಸ್ಥೆ ಮೊಟ್ಟ ಮೊದಲಿಗೆ ವಿಶ್ವ ಪರಿಸರ ದಿನವನ್ನು ಆಚರಿಸುವ ಪ್ರಸ್ತಾವನೆ ಮಂಡಿಸಿತು. ಪರಿಸರ ರಕ್ಷಣೆ ನಮ್ಮೆಲ್ಲರ ಕಾಳಜಿಯಾಗಬೇಕು. ಭೂಮಿಯ ಮೇಲಿರುವ ಸಮಸ್ತ ಜೀವಸಂಕುಲಗಳು ಬದುಕಲು ಪರಿಸರ ಅನಿವಾರ್ಯವಾಗಿದೆ. ಪರಿಸರ ಮಾಲಿನ್ಯದಿಂದ ಭೂಮಿಯ ಮೇಲೆ ವಿವಿಧ ರೀತಿಯ ದುಷ್ಪರಿಣಾಮ ಉಂಟಾಗುತ್ತಿದೆ. ಹಾಗಾಗಿ ಪರಿಸರದ ರಕ್ಷಣೆಯ ಭಾಗವಾಗಿ ನಮ್ಮ ವಿವಿಯು ಅನೇಕ ವಿನೂತನ ಕಾರ್ಯಕ್ರಮಗಳನ್ನು ಮಾಡುತ್ತಿದೆ. ಅದರ ಭಾಗವಾಗಿ ಇಂದು ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಮಾಡುತ್ತಿದೆ ಎಂದರು.

ವಿವಿಯ ಮೌಲ್ಯಮಾಪನ ಕುಲಸಚಿವ ಎನ್.ಎಂ. ಸಾಲಿ ಮಾತನಾಡಿ, ಪರಿಸರ ರಕ್ಷಣೆ ಎನ್ನುವುದು ನಮ್ಮ ಮನೆಯಿಂದಲೆ ಪ್ರಾರಂಭವಾಗಬೇಕು. ನಮ್ಮ ಮನೆ ಹಾಗೂ ಮನೆ ಸುತ್ತಮುತ್ತಲಿನ ವಾತಾವರಣವನ್ನು ಅಚ್ಚುಕಟ್ಟಾಗಿ ನಿರ್ಮಾಣ ಮಾಡಲು ಸ್ವ ಆಸಕ್ತಿಯಿಂದ ಕ್ರಮ ಕೈಗೊಳ್ಳಬೇಕು ಎಂದರು.

ನಂತರ ವಿವಿಯ ಆವರಣದಲ್ಲಿ ಜಿಲ್ಲಾಧಿಕಾರಿಗಳು ಸಸಿಗಳನ್ನು ನೆಡುವುದರ ಮೂಲಕ ವನಮಹೋತ್ಸವಕ್ಕೆ ಚಾಲನೆ ನೀಡಿದರು. ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಡಾ. ವಿಜಯಲಕ್ಷ್ಮೀ ಗೇಟಿಯವರ ನೇತೃತ್ವದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು. ಹಿರಿಯ ಸಂಶೋಧನಾಧಿಕಾರಿ ಡಾ. ಪ್ರೇಮಕುಮಾರ, ಸಿಂಡಿಕೇಟ್ ಸದಸ್ಯರಾದ ವೆಂಕಟೇಶ ಕೆ. ಹಾಗೂ ವಲಯ ಅರಣ್ಯಾಧಿಕಾರಿಗಳ ಸಿಬ್ಬಂದಿ ವರ್ಗ, ವಿವಿಯ ಬೋಧಕ ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

ಸಹಾಯಕ ಕುಲಸಚಿವ ಷಹಜಾನ್ ಮುದಕವಿ ಸ್ವಾಗತಿಸಿದರು. ಕಲಾ ಅಧ್ಯಾಪಕ ಶರೀಫ ಮಾಕಪ್ಪವರ ಹಾಗೂ ತಂಡದವರು ಪರಿಸರ ಗೀತೆಗಳನ್ನು ಹಾಡಿದರು. ಸಹಾಯಕ ಪ್ರಾಧ್ಯಾಪಕ ಡಾ. ಚಂದ್ರಪ್ಪ ಸೊಬಟಿ ನಿರೂಪಿಸಿದರು. ಡಾ. ಮಲ್ಲಿಕಾರ್ಜುನ ಮಾನ್ಪಡೆ ವಂದಿಸಿದರು.

ಕನ್ನಡಪ್ರಭ Wed, 08 June 2022
https://kpepaper.asianetnews.com/c/68500333

**Source: Kannadaprabha_08-06-2022**